# Akashvani: Bangalore
# Regional News In Kannada
# 30.10.2025 : 1430hrs


## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 30.10.2025 : 1430hrs


***********

**ಮುಖ್ಯಾಂಶಗಳು:**

1. ಕೇಂದ್ರ ಸಚಿವ ಮನೋಹರ್ ಲಾಲ್ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ದಕ್ಷಿಣ ರಾಜ್ಯಗಳ ನಗರಾಭಿವೃದ್ಧಿ ಸಚಿವರ ಸಮ್ಮೇಳನ
2. ಯಶವಂತಪುರದ ರೈಲ್ವೆ ಕೋಚಿಂಗ್ ಡಿಪೋಗೆ ಕೇಂದ್ರ ಸಚಿವ ವಿ. ಸೋಮಣ್ಣ ಭೇಟಿ; ಸ್ವಚ್ಛತೆಗೆ ಆದ್ಯತೆ ನೀಡಲು ಸೂಚನೆ
3. ಸಂಗೊಳ್ಳಿಯ ರಾಯಣ್ಣ ಸೈನಿಕ ಶಾಲೆಯನ್ನು ದೇಶದಲ್ಲಿಯೇ ಮಾದರಿ ಸೈನಿಕ ಶಾಲೆಯನ್ನಾಗಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ
4. ದೇಶದ ಏಕತೆಗಾಗಿ ಮೈಸೂರಿನಲ್ಲಿ ಐಕ್ಯತಾ ಓಟ; ಜರ್ಮನಿಯ ಪೊಲೀಸ್ ಅಧಿಕಾರಿಗಳು ಭಾಗಿ
5. ಬೆಂಗಳೂರಿನಲ್ಲಿ ತ್ಯಾಜ್ಯ ವಿಲೇವಾರಿ ಕುರಿತಂತೆ ಜಾಗೃತಿ; ರಸ್ತೆ ಬದಿಗಳಲ್ಲಿ ಕಸ ಎಸೆಯದಂತೆ ಜಿಬಿಎ ಎಚ್ಚರಿಕೆ

***********

ಕೇಂದ್ರ ಸರ್ಕಾರದ ಗೃಹ ಮತ್ತು ನಗರ ವ್ಯವಹಾರಗಳ ಸಚಿವಾಲಯದೊಂದಿಗೆ ಬೆಂಗಳೂರಿನಲ್ಲಿಂದು ದಕ್ಷಿಣ ಭಾರತ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ನಗರಾಭಿವೃದ್ಧಿ ಸಚಿವರ ಪ್ರಾದೇಶಿಕ ಸಭೆ ನಡೆಯಿತು.ಸಭೆಯನ್ನು ಕೇಂದ್ರ ಇಂಧನ, ವಸತಿ ಹಾಗೂ ನಗರಾಭಿವೃದ್ಧಿ ವ್ಯವಹಾರಗಳ ಸಚಿವ ಮನೋಹರ ಲಾಲ್ ಉದ್ಘಾಟಿಸಿದರು. ಸಭೆಯಲ್ಲಿ ಕರ್ನಾಟಕ, ತಮಿಳುನಾಡು, ಕೇರಳ, ಲಕ್ಷದ್ವೀಪ ಮತ್ತು ಪುದುಚೇರಿಯ ಸಚಿವರು ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು. ಬಳಿಕ

ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಆಯಾಯ ರಾಜ್ಯದ ಸಮಸ್ಯೆಗಳನ್ನು ಸಚಿವರು, ಕೇಂದ್ರ ಸಚಿವರಿಗೆ ವಿವರಿಸಿದ್ದಾರೆ. ಬೆಂಗಳೂರು ಒಂದು ಗ್ಲೋಬಲ್ ಹಬ್ ಆಗಿದ್ದು, ನಗರದ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಕೇಂದ್ರ ಸಚಿವರು ಭರವಸೆ ನೀಡಿದ್ದಾರೆ ಎಂದು ತಿಳಿಸಿದರು. ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅವರೂ, ನಗರಾಭಿವೃದ್ಧಿ ಕುರಿತು ವಿವಿಧ ಅಂಶಗಳನ್ನು ಹಂಚಿಕೊಂಡಿದ್ದಾರೆ ಎಂದು ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದ್ದಾರೆ.

***********

ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರು  ಇಂದು ಬೆಂಗಳೂರಿನ ಯಶವಂತಪುರ ರೈಲ್ವೆ ಕೋಚಿಂಗ್ ಡಿಪೋಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಅಧಿಕಾರಿಗಳಿಂದಲೂ ಮಾಹಿತಿ ಪಡೆದರು. ವಿಶೇಷ ಅಭಿಯಾನ ೫.೦ ಪ್ರಗತಿಯನ್ನು ಪರಿಶೀಲಿಸಿದ ಅವರು, ಸ್ವಚ್ಛತೆಯ ದೃಷ್ಟಿಕೋನ ಮತ್ತು ಸಾರ್ವಜನಿಕ ಸೇವಾ ವಿತರಣೆಯಲ್ಲಿ ಶ್ರೇಷ್ಠತೆಗೆ ಕೇಂದ್ರ ಸರ್ಕಾರದ ಅಚಲ ಬದ್ಧತೆಯನ್ನು ಪುನರುಚ್ಛರಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈಲು ನಿಲ್ದಾಣಗಳಲ್ಲಿ ಪ್ರಯಾಣಿಕರ ಸುರಕ್ಷತೆಗೆ ಎಲ್ಲಾ ಕ್ರಮ ಕೈಗೊಳ್ಳಲಾಗುವುದು ಹಾಗು ರೈಲಿನಲ್ಲಿ ಸ್ವಚ್ಛತೆಗೆ ಪ್ರಮುಖ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.

ದೇಶಾದ್ಯಂತ ಸ್ವಚ್ಛ ಹಸಿರು ಮತ್ತು ಹೆಚ್ಚು ಪರಿಣಾಮಕಾರಿ ರೈಲ್ವೆ ಆವರಣಗಳನ್ನು ಖಚಿತಪಡಿಸಿಕೊಳ್ಳಲು ನಿರಂತರ ಪ್ರಯತ್ನ ಮಾಡಲಾಗುತ್ತಿದೆ ಎಂದು ತಿಳಿಸಿದರು.

***********

ಬೆಳಗಾವಿಯ ಬೈಲಹೊಂಗಲ ತಾಲೂಕಿನ ಸಂಗೊಳ್ಳಿಯಲ್ಲಿ ನಿರ್ಮಿಸಿರುವ ರಾಯಣ್ಣ ಸೈನಿಕ ಶಾಲೆಯನ್ನು ದೇಶದಲ್ಲಿಯೇ ಮಾದರಿ ಸೈನಿಕ ಶಾಲೆಯನ್ನಾಗಿ ರೂಪಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ. ನಿನ್ನೆ ವಿಧಾನಸೌಧದಲ್ಲಿ ನಡೆದ

ಸಂಗೊಳ್ಳಿ ರಾಯಣ್ಣ ಪ್ರಾಧಿಕಾರದ ಸಭೆಯಲ್ಲಿ ಮಾತನಾಡಿರುವ ಅವರು, ನಿರ್ಮಾಣ ಕಾಮಗಾರಿ ಗುಣಮಟ್ಟದ ಪರಿಶೀಲನೆ ನಡೆಸಿದ ಬಳಿಕ ಸ್ವಾಧೀನಕ್ಕೆ ಪಡೆದುಕೊಳ್ಳಬೇಕು. ಸೈನಿಕ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಕ್ರಮ ಕೈಗೊಳ್ಳಬೇಕು. ಕ್ರೀಡಾ ಚಟುವಟಿಕೆಗಳು ಸೇರಿದಂತೆ ಎಲ್ಲಾ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಿ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

***********

ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿಗೆ ಬೇಡಿಕೆಗೆ ಅನುಗುಣವಾಗಿ ರಸಗೊಬ್ಬರ ದಾಸ್ತಾನಿದ್ದು, ರೈತರಿಗೆ ಅನಾನುಕೂಲವಾಗದಂತೆ ರಸಗೊಬ್ಬರ ವಿತರಣೆ ಮಾಡುವಂತೆ ಅಧಿಕಾರಿಗಳಿಗೆ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಸೂಚಿಸಿದ್ದಾರೆ. ಕೃಷಿ ಇಲಾಖೆ, ಜಲಾನಯನ ಅಭಿವೃದ್ಧಿ ಇಲಾಖೆ ಹಾಗು ೫ ಕೃಷಿ ವಿಶ್ವವಿದ್ಯಾನಿಲಯಗಳ ಕುಲಪತಿಗಳೊಂದಿಗೆ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು, ರೈತಾಪಿ ವರ್ಗದ ಶ್ರೇಯೋಭಿವೃದ್ಧಿಗೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಶ್ರಮಿಸಬೇಕು ಎಂದು ಕರೆ ನೀಡಿದ್ದಾರೆ. ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನಿನಲ್ಲಿ ಯಾವುದೇ ಕೊರತೆ ಇಲ್ಲ ಎಂದು ತಿಳಿಸಿದ ಅವರು, ಪೂರೈಕೆ, ವಿತರಣೆಯಲ್ಲಿ ಯಾವುದೇ ಲೋಪವಾಗದಂತೆ ನಿಗಾ ವಹಿಸಬೇಕು ಎಂದು ತಿಳಿಸಿದ್ದಾರೆ.

***********

ರಾಷ್ಟ್ರೀಯ ಐಕ್ಯತ ದಿನದ ಅಂಗವಾಗಿ ಮೈಸೂರಿನಲ್ಲಿಂದು ಐಕ್ಯತಾ ಓಟ ನಡೆಯಿತು.

ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ನೇ ಜನ್ಮದಿನದ ಪ್ರಯುಕ್ತ ರಾಜ್ಯ ಪೊಲೀಸ್ ಅಕಾಡೆಮಿಯು ಪೊಲೀಸ್ ತರಬೇತಿ ಶಾಲೆಯ ಪ್ರಶಿಕ್ಷಣಾರ್ಥಿಗಳಿಗೆ ಏರ್ಪಡಿಸಿದ್ದ ಐದು ಕಿಲೋಮೀಟರ್ ಓಟಕ್ಕೆ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಕುಮಾರ್ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಪೊಲೀಸ್ ಇಲಾಖೆಯ ಪ್ರಶಿಕ್ಷಣಾರ್ಥಿಗಳ ಆರೋಗ್ಯದ

ದೃಷ್ಟಿಯಿಂದ ಹಾಗೂ ಸರ್ದಾರ್ ವಲ್ಲಬಾಯ್ ಪಟೇಲ್ ಜನ್ಮದಿನದ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ದಿನದಿಂದ ದಿನಕ್ಕೆ ಸೈಬರ್ ಅಪರಾಧಗಳು ಹೆಚ್ಚಾಗುತ್ತಿದ್ದು, ಸೈಬರ್ ಅಪರಾಧಗಳ ಪತ್ತೆಗಾಗಿ ಆಧುನಿಕ ತಂತ್ರಜ್ಞಾನಗಳನ್ನು ಅವಲಂಬಿಸಬೇಕಾಗಿದೆ. ಸಾರ್ವಜನಿಕರು ಸೈಬರ್ ಮೋಸಕ್ಕೆ ಒಳಗಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು ಜರ್ಮನಿಯ ದೇಶದ ಬಾವರಿಯ ರಾಜ್ಯದ ಪೋಲಿಸ್ ಅಧಿಕಾರಿಗಳಾದ ಮಾನ್ ಪೇಲ್ಡ್ ಗೀಗಾಲ್, ರಾಫ್ ಇರ್ನರ್ ಮಾತನಾಡಿ ಭಾರತ ದೇಶದಲ್ಲಿ ಏಕತೆಗಾಗಿ ಓಟ ಏರ್ಪಡುತ್ತಿರುವುದು ಸಂತಸ ತಂದಿದೆ ಈ ಓಟದಲ್ಲಿ ಪಾಲ್ಗೊಂಡಿರುವುದು ನಮ್ಮ ಆರೋಗ್ಯ ವೃದ್ಧಿಸಿಕೊಳ್ಳಲು ಸಹಕಾರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

***********

ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ನೇ ಜಯಂತಿ ಹಿನ್ನೆಲೆಯಲ್ಲಿ ಏಕತಾ ನಡಿಗೆ ಕಾರ್ಯಕ್ರಮವನ್ನು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಮೂರು ಕಡೆಗಳಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನವೆಂಬರ್ ೧೫ ರಂದು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ನಡೆಯಲಿರುವ ಏಕತಾ ನಡಿಗೆಯಲ್ಲಿ ಜಿಲ್ಲೆಯ ವಿವಿಧ ಶಾಲಾಕಾಲೇಜುಗಳ ೩ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಲಿದ್ದು, ೧೦ ಕಿಲೋ ಮೀಟರ್‌ವರೆಗೆ ಈ ಏಕತಾ ನಡಿಗೆ ಸಾಗಲಿದೆ ಎಂದು ತಿಳಿಸಿದ್ದಾರೆ.

****ಧ್ವನಿ **** ಸುಧಾಕರ್

***********

ಬೆಂಗಳೂರು ನಗರದ ಸ್ವಚ್ಛತೆ ಮತ್ತು ಸೌಂದರ್ಯ ಹೆಚ್ಚಿಸುವ ಉದ್ದೇಶದಿಂದ, ಉತ್ತರ ನಗರ ಪಾಲಿಕೆಯ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಹೆಬ್ಬಾಳ ವಿಭಾಗ

ವ್ಯಾಪ್ತಿಯ ಸಂಜಯ್ ನಗರ ಮಸ್ಟರಿಂಗ್ ಪಾಯಿಂಟ್‌ಗೆ ಭೇಟಿ ನೀಡಿ ಪೌರ ಕಾರ್ಮಿಕರ ಹಾಜರಾತಿ ಹಾಗೂ ಆಟೋ ಟಿಪ್ಪರ್‌ಗಳ ಕಾರ್ಯನಿರ್ವಹಣೆ ಕುರಿತು ಪರಿಶೀಲನೆ ನಡೆಸಿದರು. ಪರಿಶೀಲನೆ ಸಮಯದಲ್ಲಿ ಪೌರಕಾರ್ಮಿಕರು ಕೈಗವಸವನ್ನು ಕಡ್ಡಾಯವಾಗಿ ಧರಿಸಲು ಹಾಗೂ ಪರಿಶೀಲನೆ ವೇಳೆ ಕಂಡುಬಂದ ಎಲ್ಲಾ ಬ್ಲಾಕ್ ಸ್ಪಾಟ್ ಗಳನ್ನು ತಕ್ಷಣ ತೆರವುಗೊಳಿಸಿ, ರಸ್ತೆ ಸ್ವಚ್ಛಗೊಳಿಸಲು ಸೂಚನೆ ನೀಡಿದರು. ಒಣ ಕಸ ಮತ್ತು ಹಸಿ ಕಸವನ್ನು ಕಡ್ಡಾಯವಾಗಿ ಬೇರ್ಪಡಿಸಿ ವಿಲೇವಾರಿ ಮಾಡಲು ಆಟೋ ಟಿಪ್ಪರ್ ಚಾಲಕರಿಗೆ ಸೂಚನೆ ನೀಡಿದರು. ಇದೇ ವೇಳೆ ಕಸ ಸುರಿಯುವ ಹಬ್ಬ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು. ಉತ್ತರ ನಗರ ಪಾಲಿಕೆ ವ್ಯಾಪ್ತಿಯ ಎಲ್ಲಾ ವಿಭಾಗಗಳ ವಿವಿಧ ಪ್ರದೇಶಗಳಲ್ಲಿ ರಸ್ತೆ ಬದಿ ಹಾಗೂ ಎಲ್ಲೆಂದರಲ್ಲಿ ಕಸ ಹಾಕುವವರ ಮನೆಗಳನ್ನು ಪತ್ತೆ ಹಚ್ಚಿ ಅವರವರ ಮನೆಯ ಮುಂದೆ ಕಸ ಹಾಕಿ, ದಂಡ ವಿಧಿಸಲಾಯಿತು.

***********

ಮುಖ್ಯಮಂತ್ರಿ ಸಿದ್ದರಾಮಯ್ಯ ಕೇರಳದ ವಯನಾಡಿನ ಜಿಲ್ಲಾಧಿಕಾರಿಯಂತೆ ವರ್ತಿಸುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಎಕ್ಸ್ ಖಾತೆಯಲ್ಲಿ ವಯನಾಡು ಪ್ರವಾಸೋದ್ಯಮದ ಬಗ್ಗೆ ಪೋಸ್ಟ್ ಮಾಡಿದ್ದನ್ನು ಉಲ್ಲೇಖಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಜ್ಯದ ತೆರಿಗೆದಾರರ ಹತ್ತು ಕೋಟಿ ಹಣವನ್ನು ವಯನಾಡಿಗೆ ಬಿಡುಗಡೆ ಮಾಡಿದ್ದೀರಿ. ಆದರೆ ರಾಜ್ಯದ ಉತ್ತರ ಕರ್ನಾಟಕದ ರೈತರು ಪ್ರವಾಹದಿಂದ ತತ್ತರಿಸಿದ್ದು, ಈ ಭಾಗಕ್ಕೆ ನಿಮ್ಮ ಆದ್ಯತೆಗಳೇನು ಎಂದು ಪ್ರಶ್ನಿಸಿದ್ದಾರೆ.

********END*******